# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 457 |
| ಮಾನ್ಯ ಸದಸ್ಯರ ಹೆಸರು | : | ಶ್ರೀ.ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) |
| ವಿಷಯ | : | ಬೀದರ್ ಜಿಲ್ಲೆಯ ಬೀದರ್ ಕೋಟೆಯ ಅಭಿವೃದ್ಧಿ ಬಗ್ಗೆ. |
| ಉತ್ತರಿಸುವ ಸಚಿವರು | : | ಪ್ರವಾಸೋದ್ಯಮ ಹಾಗೂ ರೇಷ್ಮೆ ಇಲಾಖೆ ಸಚಿವರು |
| ಉತ್ತರಿಸುವ ದಿನಾಂಕ | : | 22-07-2019 |

| ಕ್ರ. ಸ. | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಯ ಪಾಪನಾಶ ಕೆರೆಯ, ಭಾಲ್ಕಿ, ಭಾತಂಬ್ರ, ಬಸವ ಕಲ್ಯಾಣ ಮತ್ತು ಬೀದರ್ ಕೋಟೆಗಳ ಅಭಿವೃದ್ಧಿಗಾಗಿ ರೂ.950.00 ಲಕ್ಷಗಳು ಮಂಜೂರಾಗಿದ್ದು, ಸದರಿ ಕಾಮಗಾರಿ ಪ್ರಾರಂಭವಾಗಿದೆಯೇ; | 1. ಬೀದರ್ ಜಿಲ್ಲೆಯ ಬೀದರ್ ನಗರದಲ್ಲಿರುವ ಪಾಪನಾಶ ಕೆರೆ ಅಭಿವೃದ್ಧಿ ಕಾಮಗಾರಿಯನ್ನು ರೂ.150.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲಾಗುತ್ತಿದೆ.<br>2. ಬೀದರ್ ಜಿಲ್ಲೆಯ ಭಾಲ್ಕಿ ತಾಲ್ಲೂಕಿನಲ್ಲಿರುವ ಕೋಟೆ ಸಂರಕ್ಷಣೆ ಕಾಮಗಾರಿಯನ್ನು ರೂ.200.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲಾಗುತ್ತಿದೆ.<br>3. ಬೀದರ್ ಜಿಲ್ಲೆಯ ಭಾಲ್ಕಿ ತಾಲ್ಲೂಕಿನ ಭಾತಂಬ್ರ ಗ್ರಾಮದಲ್ಲಿರುವ ಭಾತಂಬ್ರ ಕೋಟೆ ಸಂರಕ್ಷಣೆ ಅಭಿವೃದ್ಧಿ ಕಾಮಗಾರಿಯನ್ನು ರೂ.200.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲಾಗುತ್ತಿದೆ.<br>4. ಬೀದರ್ ಜಿಲ್ಲೆಯ ಬಸವಕಲ್ಯಾಣ ತಾಲ್ಲೂಕಿನಲ್ಲಿರುವ ಕೋಟೆ ಸಂರಕ್ಷಣೆ ಅಭಿವೃದ್ಧಿ ಕಾಮಗಾರಿಯನ್ನು ರೂ.200.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲಾಗುತ್ತಿದೆ.<br>5. ಬೀದರ್ ಜಿಲ್ಲೆಯ ಬೀದರ್ ನಗರದಲ್ಲಿರುವ ಕೋಟೆ ಸಂರಕ್ಷಣೆ ಕಾಮಗಾರಿಯನ್ನು ರೂ.200.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲಾಗುತ್ತಿದೆ.<br><br>ಮೇಲ್ಕಂಡ ಐದು ಕಾಮಗಾರಿಗಳನ್ನು ಕೈಗೊಳ್ಳಲು ತಾತ್ವಿಕ ಅನುಮೋದನೆ ನೀಡಲಾಗಿದ್ದು, ಕಾಮಗಾರಿ ಪ್ರಾರಂಭಿಸಲು ಕ್ರಮವಹಿಸಲಾಗುತ್ತಿದೆ. |
| ಆ) | ಹಾಗಿದ್ದಲ್ಲಿ, ಇಲ್ಲಿಯವರೆಗೆ ಎಷ್ಟು ವೆಚ್ಚವಾಗಿದೆ ಮತ್ತು ಕಾಮಗಾರಿ ಯಾವ ಹಂತದಲ್ಲಿದೆ? | ಅಂದಾಜುಪಟ್ಟಿಗಳನ್ನು ಪಡೆದು, ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ ಪರಿಶೀಲಿಸುತ್ತಿದ್ದು, ಯಾವುದೇ ವೆಚ್ಚವಾಗಿರುವುದಿಲ್ಲ. |

ಪ್ರಇ 36 ಪ್ರವಾವಿ 2019

(ಸಾ.ರಾ.ಮಹೇಶ್)
ಪ್ರವಾಸೋದ್ಯಮ ಮತ್ತು ರೇಷ್ಮೆ ಸಚಿವರು.